# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಸಂಜೀವ ಮರಡ್ಡಿ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೊಪ್ಪಳ ಮತ್ತು ಇನ್ನಿಬ್ಬರು ಆರೋಪಿತರ ವಿರುದ್ಧ ಇಲಾಖಾ ವಿಚಾರಣೆ – ವಿಚಾರಣಾಧಿಕಾರಿಗಳನ್ನು ನೇಮಿಸುವ ಬಗ್ಗೆ.

**ಓದಲಾಗಿದೆ.**

1. ಸರ್ಕಾರದ ಪತ್ರ ಸಂಖ್ಯೆ. ಗ್ರಾಅಪ 410 ಜಿಪಅ 2012 ದಿನಾಂಕ 02-07-2012
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಇವರ ಪತ್ರ ಸಂಖ್ಯೆ. ಪಂರಾಇಂ/ವಿಕೊ/ಅಧೀಕ್ಷಕರು/ಸಿಸಿಎ/ 2012-13/3161 ದಿನಾಂಕ 28-12-2012.
3. ಕಾರಣ ಕೇಳುವ ನೋಟೀಸ್ ಸಂಖ್ಯೆ. ಗ್ರಾಅಪ 410 ಜಿಪಅ 2012 ದಿನಾಂಕ. 04-04-2013

**ಪ್ರಸ್ತಾವನೆ:**

ಕೊಪ್ಪಳ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದಲ್ಲಿ ಕುಡಿಯುವ ನೀರಿನ ಯೋಜನೆಗಳ ತಾಂತ್ರಿಕ ಕಾರ್ಯ ಸಾಧ್ಯತೆಗಳನ್ನು ಪರಿಗಣಿಸದೆ, ಪರಿಕಲ್ಪಿತ ವಿನ್ಯಾಸದ ವರದಿಗಳನ್ನು ಅನುಮೋದಿಸಿ, ಸಮಾಲೋಚಕರಿಗೆ ರೂ. 1.38 ಕೋಟಿ ಶುಲ್ಕವನ್ನು ಪಾವತಿಸಿ, ಸರ್ಕಾರಕ್ಕೆ ಆರ್ಥಿಕ ನಷ್ಟವುಂಟಾಗಲು ಕಾರಣರಾದ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕೆಂದು ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ 2010-11ನೇ ಸಾಲಿನ ವರದಿಯಲ್ಲಿ ಸಮಿತಿಯು ಶಿಫಾರಸ್ಸು ಮಾಡಿದ್ದರ ಹಿನ್ನೆಲೆಯಲ್ಲಿ, ಈ ಪ್ರಕರಣದಲ್ಲಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಲು ಕಾರಣರಾದ ಅಧಿಕಾರಿ / ನೌಕರರ ವಿರುದ್ಧ ದೋಷಾರೋಪಣಾ ಪಟ್ಟಿ (ಅನುಬಂಧ-1 ರಿಂದ 4) ಯನ್ನು ಸಲ್ಲಿಸುವಂತೆ ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 02-07-2012ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳರವರನ್ನು ಕೋರಲಾಗಿತ್ತು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ರವರು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ 28-12-2012ರಲ್ಲಿ ಈ ಕೆಳಕಂಡ ಅಧಿಕಾರಿಗಳ ವಿರುದ್ಧ ದೋಷಾರೋಪಣಾ ಪಟ್ಟಿ (ಅನುಬಂಧ-1 ರಿಂದ 4) ಯನ್ನು ಸಲ್ಲಿಸಿದ್ದರು:-

*(1) ಶ್ರೀ ಸಿ. ಮೋಹನ, ಅಂದಿನ ಕಾ.ಇಂ. ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೊಪ್ಪಳ. (ನಿಧನ ಹೊಂದಿರುತ್ತಾರೆ)*

*(2) ಶ್ರೀ ಸಿ.ಪಿ.ಪಾಟೀಲ್, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ,ಕೊಪ್ಪಳ (ಸ್ವಯಂ ನಿವೃತ್ತಿ ಹೊಂದಿರುತ್ತಾರೆ)*

*(3) ಶ್ರೀ ಎಂ.ಆರ್.ವಡ್ಡರ, ಹಿಂದಿನ ಪ್ರಭಾರಿ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೊಪ್ಪಳ*

*(4) ಶ್ರೀ ಸಂಜೀವ ಮರಡ್ಡಿ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೊಪ್ಪಳ*

*(5) ಶ್ರೀ ಎ.ಎಸ್.ಪಾಟೀಲ್, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೊಪ್ಪಳ.*

*(6) ಶ್ರೀ ಎ.ಎನ್.ಚಂದ್ರಶೇಖರ್, ಅಂದಿನ ಕಾ.ಇಂ., ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೊಪ್ಪಳ ಕೊಪ್ಪಳ (ನಿಧನ ಹೊಂದಿರುತ್ತಾರೆ)*

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ರವರು ಸಲ್ಲಿಸಿರುವ ಪ್ರಸ್ತಾವನೆಯಲ್ಲಿನ 6 ಮಂದಿ ಆಪಾದಿತ ಅಧಿಕಾರಿಗಳ ಪೈಕಿ ಕ್ರಮ ಸಂಖ್ಯೆ (1)ರಲ್ಲಿನ ಶ್ರೀ ಸಿ. ಮೋಹನ ಮತ್ತು ಕ್ರಮ ಸಂಖ್ಯೆ (6)ರಲ್ಲಿನ ಶ್ರೀ ಎ.ಎನ್.ಚಂದ್ರಶೇಖರ್ ರವರುಗಳು ನಿಧನ ಹೊಂದಿರುತ್ತಾರೆ, ಸದರಿಯವರುಗಳಿಂದ ಸರ್ಕಾರಕ್ಕೆ ಉಂಟಾಗಿರುವ ನಷ್ಟದ ಮೊತ್ತವನ್ನು ಅವರ ವಾರಸುದಾರರಿಂದ ವಸೂಲಿ ಮಾಡುವ ಬಗ್ಗೆ ಪ್ರತ್ಯೇಕವಾಗಿ ಕ್ರಮ ಕೈಗೊಳ್ಳಲು ಪರಿಶೀಲಿಸಲಾಗುತ್ತಿದೆ. ಉಳಿದಂತೆ ಕ್ರಮ ಸಂಖ್ಯೆ (2) ರಲ್ಲಿನ ಶ್ರೀ ಸಿ.ಪಿ.ಪಾಟೀಲ್ ಇವರು ಸ್ವಯಂ ನಿವೃತ್ತಿ ಹೊಂದಿರುವುದರಿಂದ ಇವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಕೆ.ಸಿ.ಎಸ್.ಆರ್. ನಿಯಮ 214ರನ್ವಯ ಅವಕಾಶವಿಲ್ಲದಿರುವುದರಿಂದ, ಸದರಿಯವರ ವಿರುದ್ಧ ಸಿವಿಲ್ ದಾವೆ ಹೂಡಿ ಸರ್ಕಾರಕ್ಕೆ ಉಂಟಾದ ನಷ್ಟವನ್ನು ಲೆಕ್ಕಾಚಾರ ಮಾಡಿ ವಸೂಲಿ ಮಾಡಲು ಹಾಗೂ ಉಳಿದ 3 ಮಂದಿ ಅಧಿಕಾರಿಗಳಿಗೆ ಸರ್ಕಾರದಿಂದ ನೀಡಲ್ಪಟ್ಟ ಕಾರಣ ಕೇಳುವ ನೋಟೀಸ್‌ನೊಂದಿಗೆ ದೋಷಾರೋಪಣಾ ಪಟ್ಟಿ (ಅನುಬಂಧ-1 ರಿಂದ 4) ಗಳನ್ನು ಜಾರಿ ಮಾಡಿ, ಸ್ವೀಕೃತಿಯನ್ನು ಪಡೆದು ಸಲ್ಲಿಸುವಂತೆ ಮೇಲೆ ಕ್ರಮ ಸಂಖ್ಯೆ(3)ರಲ್ಲಿ ಓದಲಾದ ದಿನಾಂಕ. 04-04-2013ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಇವರಿಗೆ ನಿರ್ದೇಶನ ನೀಡಲಾಗಿತ್ತು.

ಸರ್ಕಾರದ ಕಾರಣ ಕೇಳುವ ನೋಟೀಸಿಗೆ ಯಾವೊಬ್ಬ ಆಪಾದಿತ ಅಧಿಕಾರಿಯು ಲಿಖಿತ ಸಮಜಾಯಷಿಯನ್ನು ಸಲ್ಲಿಸಿರುವುದಿಲ್ಲವಾದ್ದರಿಂದ, ಸದರಿಯವರುಗಳ ವಿರುದ್ಧ ಮಾಡಲಾದ ಆರೋಪಗಳಿಗೆ ಅವರ ಲಿಖಿತ ಹೇಳಿಕೆ ಏನೂ ಇಲ್ಲವೆಂದು ಭಾವಿಸಿ, ಪ್ರಕರಣದಲ್ಲಿನ ಸತ್ಯಾಸತ್ಯತೆಯನ್ನು ತಿಳಿಯುವ ಸಂಬಂಧ, ಆಪಾದಿತ 3 ಮಂದಿ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆ ಜರುಗಿಸಲು ನಿರ್ಧರಿಸಿ, ಸರ್ಕಾರವು ಈ ಮುಂದಿನಂತೆ ಆದೇಶಿಸಿದೆ.

<u>ಆದೇಶ ಸಂಖ್ಯೆ : ಗ್ರಾಅಪ 410 ಜಿಪಅ 2012 ಬೆಂಗಳೂರು, ದಿನಾಂಕ 21-06-2013</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಮತ್ತು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 13ರನ್ವಯ ಈ ಕೆಳಕಂಡ ಅಧಿಕಾರಿಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ ನಡೆಸಲು ಶ್ರೀ ಎಸ್.ವೈ.ಕುಂಬಾರ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಕೊಪ್ಪಳ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ:-

*(1) ಶ್ರೀ ಸಂಜೀವ ಮರಡ್ಡಿ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೊಪ್ಪಳ*

*(2) ಶ್ರೀ ಎಂ.ಆರ್.ವಡ್ಡರ, ಹಿಂದಿನ ಪ್ರಭಾರಿ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೊಪ್ಪಳ*

*(3) ಶ್ರೀ ಎ.ಎಸ್.ಪಾಟೀಲ್, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೊಪ್ಪಳ.*

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಲ್ಲಿ ನಿಗಧಿಪಡಿಸಿರುವ ಕಾರ್ಯ ವಿಧಾನದ ಪ್ರಕಾರ ನಡೆಸಿ ವರದಿಯನ್ನು ನಾಲ್ಕು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗಧಿತ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್.ಸಿ.ರಾಜಪ್ಪ),
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕಪತ್ರ 1& 2) / (ಆಡಿಟ್)
2. ಸರ್ಕಾರಕ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ/ ಸಣ್ಣ ನೀರಾವರಿ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ
6. ಶ್ರೀ ಎಸ್.ವೈ.ಕುಂಬಾರ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ. 394, 18ನೇ ಮೇನ್, 6ನೇ ಬ್ಲಾಕ್, ಕೋರಮಂಗಲ, ಬೆಂಗಳೂರು-95. (ಮೊಬೈಲ್ ಸಂಖ್ಯೆ. 9900245450)
7. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಕೊಪ್ಪಳ - ಸಂಬಂಧಿಸಿದ ದಾಖಲೆಗಳನ್ನು ವಿಚಾರಣಾಧಿಕಾರಿಗಳಿಗೆ ಮಂಡಿಸಿ ವಿಚಾರಣೆ ಸುಗಮವಾಗಿ ನಡೆಸಲು ಕ್ರಮವಹಿಸಲು ಕೋರಿದೆ.
8. ಸಂಬಂಧಿಸಿದ ಅಧಿಕಾರಿಗಳಿಗೆ - ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಇವರ ಮುಖಾಂತರ.
9. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ & ಸಿ)
10. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
11. ಗ್ರಾ.ಅ.ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಅಪರ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
12. ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ಇಲಾಖೆ, ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
13. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.